ಒ ಎಸ್ 78/2021

**P.W.1**

**ದಿನಾಂಕಃ 09-02-2022 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ** ಶ್ರೀ ಬಿ ಕೆ ವಿ ವಕೀಲರಿಂದಃ

1. ನನ್ನ ಕುಟುಂಬದ ವಂಶವೃಕ್ಷವನ್ನು ಹಾಜರುಪಡಿಸಿದ್ದು ಅದನ್ನು ನಿಪಿ.1 ಎಂದು ಗುರುತಿಸಲಾಯಿತು. ನಾಗಮಂಗಲ ತಾಲ್ಲೂಕು ಕಾಲಿಂಗನ ಹಳ್ಳಿ ಗ್ರಾಮದ ಜಮೀನು ಸರ್ವೆ ನಂ.9 ಕ್ಕೆ ಸಂಬಂಧಿಸಿದಂತೆ 1968-69 ರಿಂದ 2021-22 ರ ವರೆಗೆ ಒಟ್ಟು 11 ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು. ಅವುಗಳನ್ನು ನಿಪಿ.2 ರಿಂದ 12 ಎಂದು ಗುರುತಿಸಲಾಯಿತು. ರೆಕಾರ್ಡ ಆಫ್ ರೈಟ್ ನ್ನು ನಿಪಿ.13 ಎಂದು ಗುರುತಿಸಲಾಯಿತು. ಎಂ ಆರ್ ನಂ.10/2005-06 ಅನ್ನು ನಿಪಿ.14 ಎಂದು ಗುರುತಿಸಲಾಯಿತು. ಪ್ರತಿವಾದಿಯರಿಗೆ ನಮ್ಮ ವಕೀಲರ ಮುಖಾಂತರ ಕೊಟ್ಟಿರುವ ನೋಟೀಸಿನ ಕಛೇರಿ ಪ್ರತಿಯನ್ನು ನಿಪಿ.15 ಎಂದು ಗುರುತಿಸಲಾಯಿತು. ಎರಡು ಅಂಚೆ ಸ್ವೀಕೃತಿ ಪತ್ರಗಳನ್ನು ನಿಪಿ.16 ಮತ್ತು 17 ಎಂದು ಗುರುತಿಸಲಾಯಿತು. ಕಾರಣ ದಾವೆಯನ್ನು ಡಿಕ್ರಿ ಮಾಡಬೇಕೆಂದು ಕೋರಿಕೊಳ್ಳುತ್ತೇನೆ.

**ಪಾಟೀ ಸವಾಲುಃ** ( ಪ್ರತಿವಾದಿಯರು ಏಕ ಪಕ್ಷೀಯವಾಗಿರುತ್ತಾರೆ ಕಾರಣ ಪಾಟೀ ಸವಾಲನ್ನು ಇಲ್ಲ ಎಂದು ತೆಗೆದುಕೊಳ್ಳಲಾಯಿತು.)

**ಮರುವಿಚಾರಣೆಃ** ಇಲ್ಲ.

( ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು )

ಓದಿ ಹೇಳಿ ಕೇಳಿ ಸರಿ ಇದೆ

ಸಾಕ್ಷಿದಾರರ ಸಹಿಃ

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,
ನಾಗಮಂಗಲ.